**National**
**Kannada**
**06.05.2025 / 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ಮುಕ್ತ ವ್ಯಾಪಾರ ಒಪ್ಪಂದಕ್ಕೆ ಭಾರತ- ಬ್ರಿಟನ್ ಪರಸ್ಪರ ಒಪ್ಪಿಗೆ

೨. ಪಹಲ್ಗಾಮ್ ಭಯೋತ್ಪಾದಕ ದಾಳಿ ಹಿನ್ನೆಲೆ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರೊಂದಿಗೆ ಪ್ರಧಾನಿ ಉನ್ನತಮಟ್ಟದ ಸಭೆ

೩. ದೇಶಾದ್ಯಂತ ೨೪೪ ಜಿಲ್ಲೆಗಳಲ್ಲಿ ನಾಳೆ ರಕ್ಷಣಾ ಅಣಕು ಕವಾಯತು

೪. ಐಪಿಎಲ್ ಟಿ-೨೦ ಕ್ರಿಕೆಟ್; ಮುಂಬೈ ಇಂಡಿಯನ್ಸ್ ವಿರುದ್ಧ ಟಾಸ್ ಗೆದ್ದ ಗುಜರಾತ್ ಟೈಟಾನ್ಸ್ ಫೀಲ್ಡಿಂಗ್ ಆಯ್ಕೆ

**<><*<><>*><>**

ಭಾರತ ಮತ್ತು ಬ್ರಿಟನ್, ಮಹತ್ವಾಕಾಂಕ್ಷೆಯ ಮತ್ತು ಪರಸ್ಪರ ಪ್ರಯೋಜನಕಾರಿ ಮುಕ್ತ ವ್ಯಾಪಾರ ಒಪ್ಪಂದವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿವೆ. ಪ್ರಧಾನಿ ನರೇಂದ್ರ ಮೋದಿ ಇಂದು ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದರು. ಈ ಮಹತ್ವದ ಒಪ್ಪಂದಗಳು ಭಾರತ-ಬ್ರಿಟನ್ ನಡುವೆ ಸಮಗ್ರ ಕಾರ್ಯತಂತ್ರದ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸುತ್ತವೆ. ಅಲ್ಲದೇ, ವ್ಯಾಪಾರ, ಹೂಡಿಕೆ, ಬೆಳವಣಿಗೆ, ಉದ್ಯೋಗ ಸೃಷ್ಟಿ ಮತ್ತು ನಾವೀನ್ಯತೆಯನ್ನು ವೇಗಗೊಳಿಸುತ್ತವೆ ಎಂದು ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಇದೇ ವೇಳೆ ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ಅವರನ್ನು ಭಾರತಕ್ಕೆ ಆಗಮಿಸುವಂತೆ ಪ್ರಧಾನಿ ಮೋದಿ ಆಹ್ವಾನಿಸಿದರು.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರಿಗೆ ದೂರವಾಣಿ ಕರೆ ಮಾಡಿ, ಎರಡನೇ ಅವಧಿಗೆ ಆಸ್ಟ್ರೇಲಿಯಾ ಪ್ರಧಾನಿಯಾಗಿ ಆಯ್ಕೆಯಾಗಿರುವುದಕ್ಕೆ ಅಭಿನಂದನೆ ಸಲ್ಲಿಸಿದ್ದಾರೆ. ಭಾರತ-ಆಸ್ಟ್ರೇಲಿಯಾ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ ಬಲಪಡಿಸುವ ತಮ್ಮ ಬದ್ಧತೆಯನ್ನು ಉಭಯ ನಾಯಕರು ಪುನರುಚ್ಚರಿಸಿದರು. ಕಳೆದ ಐದು ವರ್ಷಗಳಲ್ಲಿ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯು ವಿವಿಧ ಕ್ಷೇತ್ರಗಳಲ್ಲಿ ಬಲವಾದ ಸಹಕಾರವನ್ನು ಅಭಿವೃದ್ಧಿಪಡಿಸಲಾಗಿದೆ. ದ್ವಿಪಕ್ಷೀಯ ಸಂಬಂಧಗಳನ್ನು ಗಟ್ಟಿಗೊಳಿಸುವಲ್ಲಿ ಭಾರತೀಯ ಮೂಲದ ಚೈತನ್ಯಶೀಲ ಅನಿವಾಸಿಗಳು ಪ್ರಮುಖ ಪಾತ್ರ ವಹಿಸಿದ್ದರು ಎಂದು ಹೇಳಿದರು. ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆಯೂ ಉಭಯ ನಾಯಕರು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಅಲ್ಲದೇ, ಮುಕ್ತ, ಸ್ಥಿರ, ನಿಯಮ-ಆಧಾರಿತ ಮತ್ತು ಸಮೃದ್ಧ ಇಂಡೋ-ಪೆಸಿಫಿಕ್ ಅನ್ನು ಉತ್ತೇಜಿಸುವಲ್ಲಿ ಒಟ್ಟಾಗಿ ಕೆಲಸ ಮಾಡುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದರು. ಇದೇ ವೇಳೆ ಆಸ್ಟ್ರೇಲಿಯಾ ಪ್ರಧಾನಿ ಅಲ್ಬನೀಸ್ ಅವರನ್ನು ಭಾರತಕ್ಕೆ ಭೇಟಿ ನೀಡುವಂತೆ ಪ್ರಧಾನಿ ನರೇಂದ್ರ ಮೋದಿ ಆಹ್ವಾನಿಸಿದರು.

<><*<><>*><>

ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ನವದೆಹಲಿಯ ಅವರ ನಿವಾಸದಲ್ಲಿ ಇಂದು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಭೇಟಿಯಾಗಿ ಉನ್ನತಮಟ್ಟದ ಮಾತುಕತೆ ನಡೆಸಿದರು. ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ನಿನ್ನೆ ಪ್ರಧಾನಿ ಅವರನ್ನು ಭೇಟಿಯಾಗಿದ್ದರು. ಇದಕ್ಕೂ ಮುನ್ನ ಭಾರತೀಯ ವಾಯುಪಡೆಯ ಮುಖ್ಯಸ್ಥ ಏರ್‌ಚೀಫ್ ಮಾರ್ಷಲ್ ಅಮರ್‌ಪ್ರೀತ್ ಸಿಂಗ್, ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್.ಕೆ. ತ್ರಿಪಾಠಿ ಹಾಗೂ ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅವರೊಂದಿಗೆ ಪ್ರತ್ಯೇಕವಾಗಿ ಪ್ರಧಾನಿ ನರೇಂದ್ರ ಮೋದಿ ಸಭೆಗಳನ್ನು ನಡೆಸಿದ್ದರು. ಪಹಲ್ಗಾಮ್ ದಾಳಿಯ ಹಿನ್ನೆಲೆಯಲ್ಲಿ ಭದ್ರತೆಗೆ ಸಂಬಂಧಿಸಿದಂತೆ ಈ ಸರಣಿ ಸಭೆಗಳು ನಡೆಯುತ್ತಿವೆ.

<><*<><>*><>

ಕೇಂದ್ರ ಗೃಹ ಇಲಾಖೆ, ದೇಶದ್ಯಾಂತ ನಾಳೆ ನಾಗರಿಕರಿಗೆ ರಕ್ಷಣಾ ಅಣಕು ಕವಾಯತು ಏರ್ಪಡಿಸಿದೆ. ಈ ಕುರಿತು ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳೊಂದಿಗೆ ಕೇಂದ್ರ ಗೃಹ ಕಾರ್ಯದರ್ಶಿ ಗೋವಿಂದ್ ಮೋಹನ್ ಅವರು ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದರು.  ಕರ್ನಾಟಕದ ಬೆಂಗಳೂರು ಮತ್ತು ರಾಯಚೂರು ಸೇರಿದಂತೆ ದೇಶದ ೨೪೪ ಜಿಲ್ಲೆಗಳಲ್ಲಿ ನಾಳೆ ರಕ್ಷಣಾ ಅಣಕು ಕವಾಯತು ನಡಯಲಿದೆ. ಇದರ ಭಾಗವಾಗಿ ಆಯ್ದ ಪ್ರದೇಶಗಳಲ್ಲಿ ವಾಯುದಾಳಿ ಎಚ್ಚರಿಕೆ ಸೈರನ್‌ಗಳನ್ನು ಅಳವಡಿಸುವುದು, ವಿದ್ಯಾರ್ಥಿಗಳು ಮತ್ತು ನಾಗರಿಕರಿಗೆ ವೈಮಾನಿಕ ದಾಳಿ ಅಥವಾ ಬಾಂಬ್ ದಾಳಿಯಂತಹ ತುರ್ತು ಸಂದರ್ಭದಲ್ಲಿ ಹೇಗೆ ಪ್ರತಿಕ್ರಿಯಿಸಬೇಕೆಂಬುದರ ಕುರಿತು ಹೇಳಿಕೊಡುವುದು, ಶತ್ರು ದಾಳಿ ಸಂದರ್ಭದಲ್ಲಿ ಕಿಟಿಕಿಗಳಿಂದ ಮನೆ ಹೊರಗೆ ಬೆಳಕು ಹೋಗದಂತೆ ಮುಚ್ಚುವುದು, ವಿದ್ಯುತ್ ಮುಖ್ಯ ಸ್ಥಾವರಗಳು, ಪ್ರಮುಖ ಸಾರಿಗೆ ವ್ಯವಸ್ಥೆಯನ್ನು ರಕ್ಷಿಸುವುದರ ಬಗ್ಗೆ ಕ್ರಮ ವಹಿಸುವುದು ಮತ್ತು ತುರ್ತು ಸಂದರ್ಭದಲ್ಲಿ ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಪಾರಾಗುವುದರ ಬಗ್ಗೆ ಅಣಕು ಕವಾಯತು ನಡೆಯಲಿದೆ.

**<><*<><>*><>**

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಇಂದು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು ಜಾತಿವಾರು ಜನಗಣತಿ ಕುರಿತು ಸಲಹೆಗಳನ್ನು ನೀಡಿದ್ದಾರೆ. ಜಾತಿವಾರು ಜನಗಣತಿ ಕುರಿತು ಎಲ್ಲಾ ರಾಜಕೀಯ ಪಕ್ಷಗಳೊಂದಿಗೆ ಮಾತುಕತೆ ನಡೆಸುವಂತೆ ಮತ್ತು ತೆಲಂಗಾಣ ಸರ್ಕಾರದ ಮಾದರಿಯನ್ನು ತಮ್ಮ ಪತ್ರದಲ್ಲಿ ಖರ್ಗೆ ಉಲ್ಲೇಖಿಸಿದ್ದಾರೆ. ಮೀಸಲಾತಿಯ ಮೇಲಿನ ಶೇಕಡ ೫೦ ರ ಮಿತಿಯನ್ನು ತೆಗೆದು ಹಾಕುವಂತೆಯೂ ಅವರು ಒತ್ತಾಯಿಸಿದ್ದಾರೆ. ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಮೀಸಲಾತಿಯನ್ನು ಜಾರಿಗೆ ತರುವಂತೆ ಮಲ್ಲಿಕಾರ್ಜುನ ಖರ್ಗೆ ಒತ್ತಾಯಿಸಿದ್ದಾರೆ. ಏತನ್ಮಧ್ಯೆ, ಕೇಂದ್ರ ಸರ್ಕಾರದ ಜಾತಿವಾರು ಜನಗಣತಿ ನಿರ್ಧಾರಕ್ಕೆ ಮನ್ನಣೆ ಪಡೆಯುವ ಹತಾಶೆಯಲ್ಲಿ ಈ ಪತ್ರವನ್ನು ಬರೆಯಲಾಗಿದೆ ಎಂದು ಬಿಜೆಪಿ ಆರೋಪಿಸಿದೆ. ಆಕಾಶವಾಣಿಯೊಂದಿಗೆ ಮಾತನಾಡಿದ ಬಿಜೆಪಿ ವಕ್ತಾರ ಗುರುಪ್ರಕಾಶ್, ಕೇಂದ್ರ ಸರ್ಕಾರ ಜಾತಿವಾರು ಜನಗಣತಿಯನ್ನು ಮಾಡುವ ನಿರ್ಧಾರವನ್ನು ಘೋಷಿಸಿದ ನಂತರ ಕಾಂಗ್ರೆಸ್‌ಗೆ ಯಾವುದೇ ವಿಷಯಗಳು ಗೋಚರಿಸುತ್ತಿಲ್ಲ. ಈ ಹಿಂದೆ ಯಾವುದೇ ಪ್ರಧಾನಿಯೂ ಜಾತಿವಾರು ಜನಗಣತಿ ನಡೆಸುವ ನಿರ್ಧಾರ ತೆಗೆದುಕೊಂಡಿಲ್ಲ. ಆದರೆ, ಪ್ರಧಾನಿ ನರೇಂದ್ರ ಮೋದಿಯವರು ಈ ನಿರ್ಧಾರವನ್ನು ಘೋಷಿಸಲು ಧೈರ್ಯ ತೋರಿದ್ದಾರೆ ಎಂದು ಹೇಳಿದರು.

**<><*<><>*><>**

ಗಗನಯಾನ ಕಾರ್ಯಾಚರಣೆಯ ಯಶಸ್ಸನ್ನು ಖಚಿತಪಡಿಸಿಕೊಳ್ಳುವಲ್ಲಿ ನೌಕಾಪಡೆಗಳು ಹಾಗೂ ಕರಾವಳಿ ಕಾವಲುಪಡೆಗಳು ಪ್ರಮುಖ ಪಾತ್ರವಹಿಸುತ್ತವೆ ಎಂದು ಕೇಂದ್ರ ಬಾಹ್ಯಾಕಾಶ ಮತ್ತು ಪರಮಾಣು ಇಂಧನ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಅಭಿಪ್ರಾಯಪಟಿದ್ದಾರೆ. ನವದೆಹಲಿಯಲ್ಲಿಂದು ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಸಚಿವರು, ೨೦೨೬ ನೇ ಇಸವಿ ಪ್ರಮುಖ ಮೈಲುಗಲ್ಲಾಗಿದ್ದು, ಭಾರತವು ಬಾಹ್ಯಾಕಾಶ ಮತ್ತು ಆಳ ಸಮುದ್ರ ಎರಡನ್ನೂ ಅನ್ವೇಷಿಸುತ್ತದೆ ಎಂದು ಹೇಳಿದರು. ರಾಕೆಟ್ ಉಪಕ್ರಮಗಳಿಗಾಗಿ ಬಾಹ್ಯಾಕಾಶ ಇಲಾಖೆಯ ಹೊಸ ಮಾದರಿ ಹಾಗೂ ಪಿಎಂ ಗತಿಶಕ್ತಿ, ಸ್ವಾಮಿತ್ವ, ಸ್ಮಾರ್ಟ್ ಸಿಟಿ ಮತ್ತು ಅಮೃತ್‌ನಂತಹ ರಾಷ್ಟ್ರೀಯ ಕಾರ್ಯಕ್ರಮಗಳಲ್ಲಿ ಬಾಹ್ಯಾಕಾಶ ಮತ್ತು ಡ್ರೋನ್ ತಂತ್ರಜ್ಞಾನದ ಬಳಕೆ ಹೆಚ್ಚುತ್ತಿದೆ ಎಂದರು. ಈ ತಂತ್ರಜ್ಞಾನಗಳನ್ನು ರೈಲ್ವೆ, ಆರೋಗ್ಯ ರಕ್ಷಣೆ ಮತ್ತು ವಿಪತ್ತು ನಿರ್ವಹಣೆಯಂತಹ ಕ್ಷೇತ್ರಗಳಲ್ಲಿ ಸಂಯೋಜಿಸಲಾಗುತ್ತಿದೆ. ಇನ್-ಸ್ಪೇಸ್ ಇಂಟರ್‌ಫೇಸ್ ಮೂಲಕ ಖಾಸಗಿ ವಲಯದ ಭಾಗವಹಿಸುವಿಕೆ ಹೆಚ್ಚುತ್ತಿದೆ ಎಂದು ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದರು. ಇಸ್ರೋ ಅಧ್ಯಕ್ಷ ಡಾ.ವಿ.ನಾರಾಯಣನ್ ಮಾತನಾಡಿ, ೨೦೨೫ರ ಅಂತ್ಯದ ವೇಳೆಗೆ ಮಾನವರಹಿತ ಗಗನಯಾನ ಯೋಜನೆ ಪ್ರಾರಂಭವಾಗಲಿದ್ದು, ೨೦೨೭ ರ ಆರಂಭದಲ್ಲಿ ಮಾನವಸಹಿತ ಗಗನಯಾನ ಯೋಜನೆ ಆರಂಭವಾಗಲಿದೆ. ನವದೆಹಲಿಯಲ್ಲಿ ನಾಳೆ ಜಿಎಲ್‌ಇಎಕ್ಸ್-೨೦೨೫ ಪ್ರಾರಂಭವಾಗಲಿದೆ ಎಂದು ತಿಳಿಸಿದರು.

<><*<><>*><>

ಸ್ಮಾರ್ಟ್‌ಫೋನ್‌ಗಳು ಇನ್ನು ಮುಂದೆ ಕೇವಲ ಸಂವಹನ ಸಾಧನವಲ್ಲ. ಬದಲಾಗಿ ಅವು ಸಬಲೀಕರಣದ ಸಾಧನಗಳಾಗಿವೆ ಮತ್ತು ಮಾಹಿತಿ ಜಗತ್ತಿಗೆ ಹೆಬ್ಬಾಗಿಲುಗಳಾಗಿವೆ ಎಂದು ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಭಾರತ್ ಟೆಲಿಕಾಂ ೨೦೨೫ರ ೨೨ನೇ ಆವೃತ್ತಿಯ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಭಾರತವು ವಿಶ್ವದ ಎರಡನೇ ಅತಿದೊಡ್ಡ ಟೆಲಿಕಾಂ ಮಾರುಕಟ್ಟೆಯಾಗಿ ಹೊರಹೊಮ್ಮಿದ್ದು, ದೇಶವು ೧.೨ ಬಿಲಿಯನ್ ಮೊಬೈಲ್ ಬಳಕೆದಾರರನ್ನು ಹೊಂದಿದೆ ಎಂದರು. ದಶಕದ ಹಿಂದೆ ೬೦ ಮಿಲಿಯನ್ ಬಳಕೆದಾರರಿದ್ದ ಬ್ರಾಡ್‌ಬ್ಯಾಂಡ್ ಬಳಕೆದಾರರ ಸಂಖ್ಯೆ ಇಂದು ೯೫೦ ಮಿಲಿಯನ್‌ಗಿಂತಲೂ ಅಧಿಕವಾಗಿದೆ. ಇಂಟರ್ನೆಟ್ ಬಳಕೆದಾರರ ಸಂಖ್ಯೆ ೨೫೦ ಮಿಲಿಯನ್‌ನಿಂದ ೯೭೦ ಮಿಲಿಯನ್‌ಗೆ ಏರಿಕೆ ಕಂಡಿದೆ ಎಂದು ಸಚಿವ ಜ್ಯೋತಿರಾದಿತ್ಯ ಹೇಳಿದರು. ಭಾರತ್ ಟೆಲಿಕಾಂ ೨೦೨೫ ಅನ್ನು ಟೆಲಿಕಾಂ ರಫ್ತು ಪ್ರಮೋಷನ್ ಕೌನ್ಸಿಲ್ ಆಯೋಜಿಸಿದೆ. ಎರಡು ದಿನಗಳ ಕಾರ್ಯಕ್ರಮವು ಪ್ರಪಂಚದಾದ್ಯಂತದ ಸಂಭಾವ್ಯ ಖರೀದಿದಾರರನ್ನು ಒಟ್ಟುಗೂಡಿಸಿ, ಭಾರತೀಯ ಟೆಲಿಕಾಂ

ಉಪಕರಣಗಳು ಮತ್ತು ಸಾಫ್ಟ್‌ವೇರ್ ತಯಾರಕರು ಹಾಗೂ ಐಸಿಟಿ ಸೇವಾ ಪರಿಹಾರ ಪೂರೈಕೆದಾರರೊಂದಿಗೆ ವ್ಯವಹಾರದಿಂದ ವ್ಯವಹಾರಕ್ಕೆ ಸಭೆಗಳಲ್ಲಿ ತೊಡಗಿಸಿಕೊಳ್ಳಲು ಸಹಾಯ ಮಾಡಿದೆ ಎಂದು ತಿಳಿಸಿದರು.

<><*<><>*><>

ಭಾರತವು ವಿಶ್ವದಲ್ಲೇ ಅತಿ ಹೆಚ್ಚು ಕೃತಕ ಬುದ್ಧಿಮತ್ತೆ ಕೌಶಲ ಹೊಂದಿದ್ದು, ಈ ಕ್ಷೇತ್ರದಲ್ಲಿ ದೇಶದ ಬೆಳೆಯುತ್ತಿರುವ ಸಾಮರ್ಥ್ಯವನ್ನು ಪ್ರತಿಬಿಂಬಿಸುತ್ತದೆ ಎಂದು ವಿಶ್ವಸಂಸ್ಥೆಯ ಅಭಿವೃದ್ಧಿ ಕಾರ್ಯಕ್ರಮ-ಯುಎನ್‌ಡಿಪಿ ವರದಿ ಮಾಡಿದೆ. ರೈತರು ಮತ್ತು ಸಣ್ಣ ವ್ಯವಹಾರಗಳನ್ನು ಸಬಲೀಕರಣಗೊಳಿಸಲು ಕೃತಕ ಬುದ್ಧಿಮತ್ತೆಯನ್ನು ಬಳಸಿಕೊಳ್ಳುವಲ್ಲಿ ಭಾರತವು ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ. ೫ ದಶಲಕ್ಷಕ್ಕೂ ಅಧಿಕ ಸಾಫ್ಟ್‌ವೇರ್ ಅಭಿವೃದ್ಧಿಗೊಳಿಸುವ ಪ್ರತಿಭಾನ್ವಿತ ಗುಂಪನ್ನು ದೇಶ ಹೊಂದಿದ್ದು, ಈ ಕ್ಷೇತ್ರದಲ್ಲಿ ನಿರಂತರ ಬೆಳವಣಿಗೆಗೆ ಕಾರಣವಾಗಿದೆ ಎಂದು ವರದಿ ಹೇಳಿದೆ. ಜಾಗತಿಕವಾಗಿ ಮಾನವ ಅಭಿವೃದ್ಧಿ ಪ್ರಗತಿಯು ನಿಧಾನಗತಿಯನ್ನು ಎದುರಿಸುತ್ತಿದ್ದರೂ, ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ವೇಗ ಪಡೆದುಕೊಳ್ಳುತ್ತಿದೆ ಎಂದು ಈ ವರದಿಯಲ್ಲಿ ವಿವರಿಸಲಾಗಿದೆ.

<><*<><>*><>

ಅಸ್ತಮಾವನ್ನು ಆರಂಭಿಕ ಹಂತದಲ್ಲೇ ಗುರುತಿಸುವ ಮೂಲಕ, ಸರಿಯಾದ ಚಿಕಿತ್ಸೆ ಪಡೆಯುವಂತೆ ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಸಲಹೆ ನೀಡಿದ್ದಾರೆ. ಇಂದು ವಿಶ್ವ ಅಸ್ತಮಾ ದಿನದ ಅಂಗವಾಗಿ, ಅಸ್ತಮಾ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಅಸ್ತಮಾದಿಂದ ಬಳಲುತ್ತಿರುವವರಿಗೆ ಆರೈಕೆ ಹೆಚ್ಚಿಸಲು ವಿಶ್ವ ಆಸ್ತಮಾ ದಿನ ನಿರ್ಣಾಯಕ ವೇದಿಯಾಗಿ ಕಾರ್ಯ ನಿರ್ವಹಿಸುತ್ತದೆ ಎಂದು ಸಚಿವ ಜೆ.ಪಿ.ನಡ್ಡಾ ಸಾಮಾಜಿಕ ಮಾಧ್ಯಮದ ಪೋಸ್ಟ್‌ನಲ್ಲಿ ಹೇಳಿದ್ದಾರೆ. ದೇಶದಲ್ಲಿ ಅಸ್ತಮಾವನ್ನು ಕಡಿಮೆ ಮಾಡಲು ಮತ್ತು ಉಸಿರಾಟದ ಆರೋಗ್ಯವನ್ನು ಉತ್ತೇಜಿಸಲು ಅದರ ನೀತಿ ನಿರೂಪಕರು, ಆರೋಗ್ಯ ವೃತ್ತಿಪರರು ಮತ್ತು ಸಮುದಾಯಗಳು ಒಟ್ಟಾಗಿ ಕೆಲಸ ಮಾಡಬೇಕೆಂದು ಸಚಿವರು ಒತ್ತಾಯಿಸಿದರು. ಉಸಿರಾಟದ ಸ್ಥಿತಿಯ ಲಕ್ಷಣಗಳನ್ನು ನಿರ್ಲಕ್ಷಿಸಬಾರದು ಮತ್ತು ಸಾಮಾನ್ಯ ಅಸ್ತಮಾ ಪ್ರಚೋದಕಗಳನ್ನು ತಡೆಗಟ್ಟಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಜನರನ್ನು ಒತ್ತಾಯಿಸಿದರು. ಜೀವನಶೈಲಿಯಲ್ಲಿ ಸುಧಾರಣೆ, ಮಾಲಿನ್ಯ ನಿಯಂತ್ರಣ ಮತ್ತು ಜಾಗೃತಿ ಆಸ್ತಮ ತಡೆಗಟ್ಟಲು ಉತ್ತಮ ಮಾರ್ಗಗಳಾಗಿವೆ ಸಚಿವೆ ಅನುಪ್ರಿಯಾ ಪಟೇಲ್ ತಿಳಿಸಿದರು.

<><*<><>*><>

ಜಮ್ಮು-ಕಾಶ್ಮೀರದ ಪೂಂಚ್ ಜಿಲ್ಲೆಯಲ್ಲಿಂದು ಖಾಸಗಿ ಬಸ್‌ವೊಂದು ನಿಯಂತ್ರಣ ತಪ್ಪಿ ಆಳವಾದ ಕಂದಕಕ್ಕೆ ಉರುಳಿದ ಪರಿಣಾಮ ನಾಲ್ವರು ಪ್ರಯಾಣಿಕರು ಮೃತಪಟ್ಟಿದ್ದು, ಇತರೆ ೪೪ ಪ್ರಯಾಣಿಕರು ಗಾಯಗೊಂಡಿದ್ದಾರೆ. ಪೂಂಚ್ ಜಿಲ್ಲೆಯ ಘಾನಿ ಗ್ರಾಮದಿಂದ ಬಸ್ ಮೆಂದಾರ್‌ಗೆ ತೆರಳುತಿತ್ತು. ಈ ವೇಳೆ ಚಾಲಕನ ನಿಯಂತ್ರಣ ತಪ್ಪಿ ಆಳವಾದ ಕಂದಕಕ್ಕೆ ಉರುಳಿದೆ. ತೀವ್ರವಾಗಿ ಗಾಯಗೊಂಡ ಐವರು ಪ್ರಯಾಣಿಕರನ್ನು ಜಮ್ಮುವಿನ ಸರ್ಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಘಟನೆ ಕುರಿತು ಜಮ್ಮು-ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಸೇರಿದಂತೆ ಅನೇಕರು ದುಃಖ ವ್ಯಕ್ತಪಡಿಸಿದ್ದಾರೆ.

<><*<><>*><>

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಗುಜರಾತ್ ಟೈಟಾನ್ಸ್ ಮುಖಾಮುಖಿಯಾಗಿವೆ. ಟಾಸ್ ಗೆದ್ದ ಗುಜರಾರ್ ಟೈಟಾನ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೧೫೭ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೦ ಸಾವಿರದ ೭೪೧ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೮೨ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೩೮೦ ಅಂಕಗಳು ದಾಖಲಾಗಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>